ಕರ್ನಾಟಕ ಸರ್ಕಾರ
ಜಿಲ್ಲಾ ಪಂಚಾಯತ ಕಾರ್ಯಾಲಯ, ಬೆಳಗಾವಿ-590-002
ದೂರವಾಣಿ ಸಂಖ್ಯೆ: 0831-2407201 E-mail: ceo_zp_bgm@nic.in

ಕ್ರ.ಜಿಪಂ/ರಾಗ್ರಾಉ/ವಿವ-54/2023-24 ದಿನಾಂಕ: 08-02-2024

# :ಪತ್ರಿಕಾ ಪ್ರಕಟಣೆ:

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಹೊರಗುತ್ತಿಗೆ ಆಧಾರದ ಮೇರೆಗೆ "ತಾಂತ್ರಿಕ ಸಹಾಯಕರು"(ಸಿವ್ಹಿಲ್) ಹುದ್ದೆಗಳಿಗೆ ದಿನಾಂಕ:07-08-2023ರಿಂದ ದಿನಾಂಕ: 21-08-2023 ರ ವರೆಗೆ ಜಿಲ್ಲಾ ಪಂಚಾಯತ ವೆಬ್‌ಸೈಟ್ ಮೂಲಕ Online ದಲ್ಲಿ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿತ್ತು ಸದರಿ ಅವಧಿಯಲ್ಲಿ 624 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು.

ತದನಂತರ Online ದಲ್ಲಿ ನಮೂದಿಸಿದ ಅಂಕಗಳ ಆಧಾರದ ಮೇಲೆ 50 ಜನ ಅಭ್ಯರ್ಥಿಗಳನ್ನು ದಿನಾಂಕ: 29-11-2023 ರಂದು ಮೂಲ ದಾಖಲಾತಿ ಪರಿಶೀಲನೆಗೆ ಆಹ್ವಾನಿಸಲಾಗಿತ್ತು. 27 ಜನ ಅಭ್ಯರ್ಥಿಗಳು ಹಾಜರಾಗಿದ್ದರು. ಅದರಂತೆ ಜೇಷ್ಠತಾ ಪಟ್ಟಿ ತಯಾರಿಸಿ, ದಿನಾಂಕ:17-01-2024 ರಿಂದ 24-01-2024 ರ ವರೆಗೆ ಸದರಿ ಜೇಷ್ಠತಾ ಪಟ್ಟಿಗೆ ಆಕ್ಷೇಪಣೆ ಕರೆಯಲಾಗಿತ್ತು. ಅಂಕಗಳು ವ್ಯತ್ಯಾಸವಾಗಿರುವ ಬಗ್ಗೆ ಆಕ್ಷೇಪಣೆ ಸ್ವೀಕೃತವಾಗಿದ್ದವು.

ಮುಂದುವರೆದು ಈ ಆಕ್ಷೇಪಣೆಯಲ್ಲಿ ಬಹಳಷ್ಟು ಜನ ಮೂಲ ದಾಖಲಾತಿ ಪರಿಶೀಲನೆ ಮಾಹಿತಿಯ ಕೊರತೆಯಿಂದಾಗಿ ಹಾಜರಾಗಲು ಸಾದ್ಯವಾಗಿರಲಿಲ್ಲ. ಆದ್ದರಿಂದ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಮತ್ತೊಮ್ಮೆ ದಾಖಲಾತಿ ಪರಿಶೀಲನೆಗೆ ಅಂತಿಮ ಅವಕಾಶ ನೀಡುವಂತೆ ಕೋರಿರುವ ಹಿನ್ನೆಲೆಯಲ್ಲಿ, ಮಹಾತ್ಮಾ ನರೇಗಾ ಯೋಜನೆಯಡಿ "ತಾಂತ್ರಿಕ ಸಹಾಯಕರು" (ಸಿವ್ಹಿಲ್) ಹುದ್ದೆಗಳಿಗೆ ಜಿಲ್ಲಾ ಪಂಚಾಯತ ವೆಬ್‌ಸೈಟ್ ಮೂಲಕ Online ದಲ್ಲಿ ಅರ್ಜಿ ಸಲ್ಲಿಸಲಾದ 624 ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನೆಯನ್ನು ದಿನಾಂಕ: 19-02-2024 ರಂದು ಜಿಲ್ಲಾ ಪಂಚಾಯತ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ನಿಗದಿಪಡಿಸಲಾಗಿದೆ.

ಆದ್ದರಿಂದ ತಾಂತ್ರಿಕ ಸಹಾಯಕರು" (ಸಿವ್ಹಿಲ್) ಹುದ್ದೆಗೆ ಅರ್ಜಿ ಸಲ್ಲಿಸಿದ ಎಲ್ಲ ಅಭ್ಯರ್ಥಿಗಳು ತಪ್ಪದೇ ಮೂಲ ದಾಖಲಾತಿ ಪರಿಶೀಲನೆಗೆ ಕಡ್ಡಾಯವಾಗಿ ದಿನಾಂಕ: 19-02-2024 ರಂದು ಬೆಳಗ್ಗೆ 11.00 ಗಂಟೆಗೆ ಜಿಲ್ಲಾ ಪಂಚಾಯತ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಹಾಜರಾಗುವಂತೆ ಸೂಚಿಸಲಾಗಿದೆ. ಸದರಿ ದಿನದಂದು ಹಾಜರಾಗದೇ ಇದ್ದಲ್ಲಿ ಅಂಥಹ ಅಬ್ಯರ್ಥಿಗಳನ್ನು ಜೇಷ್ಠತಾ ಪಟ್ಟಿಯಲ್ಲಿ ಪರಿಗಣಿಸಲಾಗುವುದಿಲ್ಲ, ಹಾಗೂ ಯಾವುದೇ ಆಕ್ಷೇಪಣೆಗಳಿಗೆ ಅವಕಾಶ ಇರುವುದಿಲ್ಲವೆಂದು ಅಂತಿಮ ಸೂಚನೆ ನೀಡಲಾಗಿದೆ. ದಾಖಲಾತಿ ಪರಿಶೀಲನೆಗೆ ತಪ್ಪು ಮಾಹಿತಿ ಒದಗಿಸಿದಲ್ಲಿ ಅಂಥಹ ಅಭ್ಯರ್ಥಿಗಳ ವಿರುದ್ಧ ಕಾನೂನು ಪ್ರಕಾರ ಕ್ರಮ ಜರುಗಿಸಲಾಗುವುದು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತ ಬೆಳಗಾವಿ

ರಿಗೆ:
ಉಪ ನಿರ್ದೇಶಕರು
ವಾರ್ತಾ ಮತ್ತು ಪ್ರಚಾರ ಇಲಾಖೆ
ಬೆಳಗಾವಿ

ಸದರಿ ಪ್ರಕಟಣೆಯನ್ನು ಎಲ್ಲ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಲು ಕೋರಲಾಗಿದೆ.